# ಕರ್ನಾಟಕ ಸರ್ಕಾರ

ಸಂಖ್ಯೆ : ಇಎನ್ 1 ಎಎಸ್‌ಸಿ 2016

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ: 14-07-2016.

## ಸುತ್ತೋಲೆ

ವಿಷಯ : ಕರ್ನಾಟಕ ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಸರ್ಕಾರಿ ಸ್ವಾಮ್ಯಕ್ಕೆ ಒಳಪಟ್ಟಿರುವ ಸಂಸ್ಥೆಗಳಲ್ಲಿ ಕಡ್ಡಾಯವಾಗಿ **BEE 5 star rated** ವಿದ್ಯುತ್ ಉಪಕರಣಗಳನ್ನು ಮಾತ್ರ ಬಳಸುವ ಬಗ್ಗೆ.

ಉಲ್ಲೇಖ: ಅಧ್ಯಕ್ಷರು, ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ ರವರ ಅರೆ ಸರ್ಕಾರಿ ಪತ್ರ ಸಂಖ್ಯೆ: KERC/DO/D/04/2016-17/1061, ದಿನಾಂಕ 01-07-2016.

*****

ರಾಜ್ಯದಲ್ಲಿ ವಿದ್ಯುತ್ ಬೇಡಿಕೆ ಪ್ರಮಾಣವು ದಿನದಿಂದ ದಿನಕ್ಕೆ ಗಣನೀಯ ಪ್ರಮಾಣದಲ್ಲಿ ಏರುತ್ತಿದ್ದು, ವಿದ್ಯುತ್ ಬೇಡಿಕೆ ನಿರ್ವಹಣಾ ಕ್ರಮವಾಗಿ ವಿದ್ಯುತ್ ಉಳಿತಾಯ ಮಾರ್ಗಗಳನ್ನು ಅಳವಡಿಸಿಕೊಳ್ಳಬೇಕಾದ ಅವಶ್ಯಕತೆಯಿರುತ್ತದೆ. ಇಂಧನ ದಕ್ಷತೆಯುಳ್ಳ ವಿದ್ಯುತ್ ಉಪಕರಣಗಳ ಬಳಕೆಯಿಂದ ಗಮನಾರ್ಹ ಪ್ರಮಾಣದಲ್ಲಿ ವಿದ್ಯುತ್ ಉಳಿತಾಯವು ಸಾಧ್ಯವಾಗಲಿದ್ದು, ಈಗಾಗಲೇ ಸರ್ಕಾರದ ವತಿಯಿಂದ ಎಲ್.ಇ.ಡಿ. ಹಾಗೂ ಸಿ.ಎಫ್.ಎಲ್. ಬಲ್ಬ್‌ಗಳ ವಿತರಣೆ, ಹೆಚ್ಚು ಕಾರ್ಯಕ್ಷಮತೆಯುಳ್ಳ ಪಂಪ್‌ಸೆಟ್‌ಗಳ ಅಳವಡಿಕೆ ಸೇರಿದಂತೆ ಹಲವು ಇಂಧನ ಉಳಿತಾಯ ಉಪಕ್ರಮಗಳನ್ನು ಕೈಗೊಳ್ಳಲಾಗಿದೆ.

ಅಲ್ಲದೇ, ಸಮಾಜ ಕಲ್ಯಾಣ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವ್ಯಾಪ್ತಿಯಲ್ಲಿ ಎಲ್ಲಾ ನಗರ/ಪಟ್ಟಣ/ಗ್ರಾಮ ಪಂಚಾಯತಿಗಳಲ್ಲಿ ಕ್ರಮವಾಗಿ ಎಲ್ಲಾ ಗಂಗಾ ಕಲ್ಯಾಣ ಮತ್ತು ಕುಡಿಯುವ ನೀರಿನ ಸ್ಥಾವರಗಳಿಗೆ ಕಡ್ಡಾಯವಾಗಿ 4 ಅಥವಾ 5 star rated ಪಂಪ್‌ಸೆಟ್‌ಗಳನ್ನು ಅಳವಡಿಸುವಂತೆ ದಿನಾಂಕ 20-01-2016 ರಂದು ಸುತ್ತೋಲೆ ಹೊರಡಿಸಲಾಗಿದೆ.

ಈ ಮಧ್ಯೆ ಉಲ್ಲೇಖಿತ ಅರೆ ಸರ್ಕಾರಿ ಪತ್ರದಲ್ಲಿ, ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗವು, ಮೊದಲ ಹಂತದಲ್ಲಿ ಸರ್ಕಾರದ ಪ್ರತಿಯೊಂದು ಇಲಾಖೆಗಳಲ್ಲಿ ಮತ್ತು ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಲ್ಲಿ ಕಡ್ಡಾಯವಾಗಿ **BEE 5 star rated** ವಿದ್ಯುತ್ ಉಪಕರಣಗಳನ್ನು ಮಾತ್ರ ಬಳಸುವ ಮೂಲಕ ವಿದ್ಯುತ್ ಉಳಿತಾಯ ಮಾಡುವ ಕುರಿತಂತೆ ಈ ಕೆಳಕಂಡಂತೆ ಸರ್ಕಾರಕ್ಕೆ ಸಲಹೆ ನೀಡಿರುತ್ತದೆ.

> 'The Government of Karnataka, as a first step, shall make it mandatory to all its Departments and Public Sector undertaking to procure and use only BEE five-star rated electrical equipment and also to take steps to ensure mandatory sale of energy-efficient electrical equipment in the market, with a view to discourage manufacture and sale of energy-inefficient electrical-equipment'.

ಮುಂದುವರೆದು, M/s. BEE ರವರು ಸಹ star rating ಇಲ್ಲದ ವಿದ್ಯುತ್ ಉಪಕರಣಗಳ ಉತ್ಪಾದನೆಯನ್ನು ಹಂತ-ಹಂತವಾಗಿ ತಡೆಗಟ್ಟಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿರುತ್ತಾರೆ.

--2)

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ವಿದ್ಯುತ್ ಉಳಿತಾಯ ಹಾಗೂ energy-inefficient ವಿದ್ಯುತ್ ಉಪಕರಣ (electrical-equipment) ಗಳ ಉತ್ಪಾದನೆ ಹಾಗೂ ಮಾರಾಟವನ್ನು ತಗ್ಗಿಸುವ ನಿಟ್ಟಿನಲ್ಲಿ **ಸರ್ಕಾರದ ಪ್ರತಿಯೊಂದು ಇಲಾಖೆಗಳು ತಾವು ಬಳಕೆ ಮಾಡುವ ಎಲ್ಲಾ ವಿದ್ಯುತ್ ಉಪಕರಣಗಳು ಕಡ್ಡಾಯವಾಗಿ BEE 5 star rated ಮುದ್ರೆಯನ್ನು ಹೊಂದಿರುವಂತೆ ಖಾತ್ರಿಪಡಿಸಿಕೊಂಡು, ಅಳವಡಿಸಿಕೊಳ್ಳಬೇಕೆಂದು ಈ ಮೂಲಕ ಸೂಚಿಸಲಾಗಿದೆ.**

(ಪಿ. ರವಿಕುಮಾರ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಇಂಧನ ಇಲಾಖೆ.

ಇವರಿಗೆ:

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ: 82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
4. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಕೆ.ಆರ್.ರಸ್ತೆ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಮಂಗಳೂರು ವಿದ್ಯುತ್ ಸರಬರಾಜು ಕಂಪನಿ, ಪಿ.ಬಿ.ನಂ. 200, ಪ್ಯಾರಾಡಿಂ ಪ್ಲಾಜಾ, ಎ.ಬಿ.ಶೆಟ್ಟಿ ಸರ್ಕಲ್, ಮಂಗಳೂರು – 575001.
6. ವ್ಯವಸ್ಥಾಪಕ ನಿರ್ದೇಶಕರು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಮೈಸೂರು.
7. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಗುಲ್ಬರ್ಗಾ ಮುಖ್ಯ ರಸ್ತೆ, ಗುಲ್ಬರ್ಗಾ.
8. ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ನವನಗರ, ಹುಬ್ಬಳ್ಳಿ.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, 39, ಸ್ಕೌಟ್ಸ್ ಮತ್ತು ಗೈಡ್ ಬಿಲ್ಡಿಂಗ್, ಪ್ಯಾಲೇಸ್ ರಸ್ತೆ, ಬೆಂಗಳೂರು-560001.
10. ವ್ಯವಸ್ಥಾಪಕ ನಿರ್ದೇಶಕರು, ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್, ಕೆ.ಪಿ.ಟಿ.ಸಿ.ಎಲ್, ಕಟ್ಟಡ, ಕಾವೇರಿ ಭವನ, ಬೆಂಗಳೂರು-560009.
11. ವ್ಯವಸ್ಥಾಪಕ ನಿರ್ದೇಶಕರು, ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘ, ಹುಕ್ಕೇರಿ, ಬೆಳಗಾವಿ ಜಿಲ್ಲೆ.
12. ಮುಖ್ಯ ವಿದ್ಯುತ್ ಪರಿವೀಕ್ಷಕರು, ನಂ.32/1 ಮತ್ತು 2, ಎರಡನೇ ಮಹಡಿ, ಕ್ರೆಸೆಂಟ್ ಟವರ್ಸ್, ಕ್ರೆಸೆಂಟ್ ರಸ್ತೆ, ಬೆಂಗಳೂರು-560001.

ಪ್ರತಿ ಮಾಹಿತಿಗಾಗಿ :

1. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ಕೊಠಡಿ ಸಂಖ್ಯೆ 336, 3ನೇ ಮಹಡಿ, ವಿಧಾನ ಸೌಧ, ಬೆಂಗಳೂರು.
2. ಅಧ್ಯಕ್ಷರು, ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ, ಸಂಖ್ಯೆ 9/2, 6ನೇ ಮತ್ತು 7ನೇ ಮಹಡಿ, ಮಹಾಲಕ್ಷ್ಮೀ ಛೇಂಬರ್ಸ್, ಎಂ.ಜಿ. ರಸ್ತೆ, ಬೆಂಗಳೂರು.
3. ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಅಪರ ಮುಖ್ಯ ಕಾರ್ಯದರ್ಶಿಗಳ ಹಿರಿಯ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.